# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನ ಸಾಗರ ಆವರಣ, ವಿನಾಯಕನಗರ, ಕಂಟೋನ್ಮೆಂಟ್, ಬಳ್ಳಾರಿ – 583104

ಪ್ರೊ. ಶಶಿಕಾಂತ ಎಸ್ ಉಡಿಕೇರಿ
ಕುಲಸಚಿವರು(ಮೌಲ್ಯಮಾಪನ)

ದೂರವಾಣಿ: 08392-241011


ಸಂಖ್ಯೆ: ವಿಶ್ರೀಕೃವಿಬ/ಸ್ನಾತಕೋತ್ತರ/ಪರೀಕ್ಷಾ/ಅಧಿಸೂಚನೆ/2020-21/ 1909/1

ದಿನಾಂಕ: 09.03.2021

## ಪರೀಕ್ಷಾ ಅಧಿಸೂಚನೆ

**ವಿಷಯ:** ಏಪ್ರಿಲ್-2021ರ ತಿಂಗಳಿನಲ್ಲಿ ಜರುಗಲಿರುವ ಸ್ನಾತಕೋತ್ತರ, ಸ್ನಾತಕೋತ್ತರ ಡಿಪ್ಲೊಮ ಪದವಿಯ 1ನೇ, 3ನೇ ಮತ್ತು 5ನೆ ಸೆಮಿಸ್ಟರ್ ರೆಗ್ಯುಲರ್/ರಿಪೀಟರ್ಸ್ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಹಾಗೂ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 09.03.2021

*****

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ ಏಪ್ರಿಲ್-2021ರ ತಿಂಗಳಿನಲ್ಲಿ ಜರುಗಲಿರುವ ಸ್ನಾತಕೋತ್ತರ, ಸ್ನಾತಕೋತ್ತರ ಡಿಪ್ಲೊಮ ಪದವಿಯ 1ನೇ, 3ನೇ ಮತ್ತು 5ನೇ ಸೆಮಿಸ್ಟರ್ ರೆಗ್ಯುಲರ್/ರಿಪೀಟರ್ಸ್ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ, ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕಗಳು ಈ ಕೆಳಗಿನಂತಿವೆ.

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಮಹಾವಿದ್ಯಾಲಯ/ವಿಭಾಗಗಳ ಪ್ರಾಂಶುಪಾಲರು/ಮುಖ್ಯಸ್ಥರು/ಸಂಯೋಜಕರ ಮೂಲಕ ಕುಲಸಚಿವರು (ಮೌಲ್ಯಮಾಪನ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

| ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಹಾಗೂ ಪರೀಕ್ಷಾ ಶುಲ್ಕ ಪಾವತಿಸಲು ನಿಗಧಿಪಡಿಸಿದ ದಿನಾಂಕಗಳು | | |
|---|---|---|
| 01 | ದಂಡ ಶುಲ್ಕವಿಲ್ಲದೆ | 15.03.2021 ರಿಂದ 19.03.2021 |
| 02 | ದಂಡ ಶುಲ್ಕ ಪ್ರತಿ ದಿನಕ್ಕೆ ರೂ. 100/- ರಂತೆ | 20.03.2021 ರಿಂದ 24.03.2021 |
| 03 | ದಂಡ ಶುಲ್ಕ ಪ್ರತಿ ದಿನಕ್ಕೆ ರೂ. 500/- ರಂತೆ | 25.03.2021 ರಿಂದ 27.03.2021 |

### ಪರೀಕ್ಷಾ ಶುಲ್ಕದ ವಿವರಗಳು

| ಕ್ರ.ಸಂ. | ವಿವರಣೆ | ಪ್ರತಿ ಸೆಮಿಸ್ಟರ್‌ಗೆ ಪರೀಕ್ಷಾ ಶುಲ್ಕ ರೂ. (ರೆಗ್ಯೂಲರ್/ರಿಪೀಟರ್ಸ್‌ನ) |
|---|---|---|
| 01. | ಎಂ.ಎ. : ಕನ್ನಡ /ಇಂಗ್ಲೀಷ್ /ಅರ್ಥಶಾಸ್ತ್ರ /ಸಮಾಜಶಾಸ್ತ್ರ /ರಾಜ್ಯಶಾಸ್ತ್ರ /ಇತಿಹಾಸ ಮತ್ತು ಪುರಾತತ್ವಶಾಸ್ತ್ರ /ಸಮಾಜಕಾರ್ಯ /ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ/ ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ /ಪ್ರದರ್ಶನ ಕಲೆ(ನಾಟಕ) /ಮಹಿಳಾ ಅಧ್ಯಯನ / ಎಲ್.ಎಲ್.ಎಂ (ಕಾನೂನುಶಾಸ್ತ್ರ) . | ರೂ. 1,000/- |
| 02. | ಎಂ.ಕಾಂ. | ರೂ. 1,000/- |
| 03. | ಎಂ.ಎಸ್ಸಿ. : ರಸಾಯನಶಾಸ್ತ್ರ /ಔದ್ಯೋಗಿಕ ರಸಾಯನಶಾಸ್ತ್ರ /ಗಣಿತಶಾಸ್ತ್ರ /ಗಣಕ ವಿಜ್ಞಾನ/ ಜೈವಿಕ ತಂತ್ರಜ್ಞಾನ /ಭೌತಶಾಸ್ತ್ರ /ಪ್ರಾಣಿಶಾಸ್ತ್ರ /ಸಸ್ಯಶಾಸ್ತ್ರ /ಸೂಕ್ಷ್ಮ ಜೀವಶಾಸ್ತ್ರ. | ರೂ. 1,200/- |
| 04. | ಎಂ.ಎಡ್ / ಎಂ.ಪಿ.ಎಡ್. | ರೂ. 1,200/- |
| 05. | ಎಂ.ಟೆಕ್ (ಖನಿಜ ಸಂಸ್ಕರಣ). ಎಂ.ಎಸ್ಸಿ (ಅನ್ವಯಿಕ ಭೂವಿಜ್ಞಾನ) | ರೂ. 1,400/- |
| 06. | ಎಂ.ಬಿ.ಎ (ಸಾಮಾನ್ಯ) / ಎಂ.ಬಿ.ಎ.(ಎಫ್.ಎಂ.) | ರೂ. 1,000/- |
| 07. | ಪಿಜಿ. ಡಿಪ್ಲೊಮ | ರೂ. 1,400/- |
| 08. | ಅಂಕಪಟ್ಟಿ ಶುಲ್ಕ | ರೂ. 150/- |
| ಲಿಖಿತ/ಪ್ರಾಯೋಗಿಕ ಪರೀಕ್ಷೆಗಳ ಪುನರಾವರ್ತಿತ ವಿದ್ಯಾರ್ಥಿಗಳು ಪೂರ್ಣ ಶುಲ್ಕವನ್ನು ಪಾವತಿಸಬೇಕು. | | |

ಪು.ತಿ.ನೋ...

ಮುಂದುವರೆದು, ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ವಿದ್ಯಾರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮುಖಾಂತರ ಕುಲಸಚಿವರು(ಮೌಲ್ಯಮಾಪನ) (ಪರೀಕ್ಷಾ ವಿಭಾಗ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

**:ಪ್ರಾಂಶುಪಾಲರು ಹಾಗೂ ವಿದ್ಯಾರ್ಥಿಗಳಿಗೆ ಸೂಚನೆ:**

1. ವಿದ್ಯಾರ್ಥಿಗಳು ಆನ್ ಲೈನ್ (Online) ಮುಖಾಂತರ ಅರ್ಜಿ ಸಲ್ಲಿಸಲು http://student.logisys.org/vskub/ ನಲ್ಲಿ login ಆಗಿ ನೋಂದಣಿ ಸಂಖ್ಯೆ, ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ, ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ, ಶುಲ್ಕ ಭರಿಸಿದ ನಂತರ ಪ್ರತಿಯನ್ನು ತಕ್ಷಣ ವಿದ್ಯಾರ್ಥಿಗಳು ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಯಗಳಲ್ಲಿ ಸಲ್ಲಿಸಬೇಕು.
2. SC/ST ಹಾಗೂ OBC ಅಭ್ಯರ್ಥಿಗಳು (ಸರ್ಕಾರಿ ಆದೇಶಗಳನ್ವಯ ವಾರ್ಷಿಕ ಆದಾಯದ ಮಿತಿಯೊಳಗೆ ಬರುವ ಅಭ್ಯರ್ಥಿಗಳು) ಪ್ರವರ್ಗ-1, 2ಎ, 2ಬಿ, 3ಎ, 3ಬಿ ವಿದ್ಯಾರ್ಥಿಗಳು ವಿನಾಯಿತಿ ಶುಲ್ಕವನ್ನು ಹಾಗೂ ಇತರೆ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಈ ಬಗ್ಗೆ ಎಲ್ಲಾ ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳು SC/ST ಹಾಗೂ OBC ವಿದ್ಯಾರ್ಥಿಗಳ ಆದಾಯ ವಿನಾಯಿತಿಯನ್ನು ಪರಿಗಣಿಸುವ ಮುನ್ನ ಆದಾಯ ಮಿತಿಗೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಸೂಕ್ತವಾಗಿ ಪರಿಶೀಲಿಸಿ ಆದಾಯ ಮಿತಿಗೆ ಒಳಪಡುವ ವಿದ್ಯಾರ್ಥಿಗಳ ಮಾಹಿತಿಯನ್ನು ಜಾಲತಾಣದಲ್ಲಿ ಧೃಡೀಕರಿಸಲು ತಿಳಿಸಲಾಗಿದೆ.
3. ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಯಗಳಿಂದ ಧೃಡೀಕರಣ ಮತ್ತು ಅನುಮೋದನೆ ಪಡೆದಿರುವ ವಿದ್ಯಾರ್ಥಿಗಳಿಗೆ ಮಾತ್ರ ಶುಲ್ಕ ವಿನಾಯಿತಿ ಪರವಾನಿಗೆ ಇರುತ್ತದೆ.
4. SC/ST ಹಾಗೂ OBC ಅಭ್ಯರ್ಥಿಗಳು (ಸರ್ಕಾರಿ ಆದೇಶಗಳನ್ವಯ ವಾರ್ಷಿಕ ಆದಾಯದ ಮಿತಿಯೊಳಗೆ ಬರುವ ಅಭ್ಯರ್ಥಿಗಳು) ರೆಗ್ಯೂಲರ್ (Freshers) ವಿದ್ಯಾರ್ಥಿಗಳು ಅಂಕಪಟ್ಟಿ ಶುಲ್ಕ ರೂ. 150/-ನ್ನು ಮಾತ್ರ ಪಾವತಿಸಬೇಕು. ಆದರೆ ಸದರಿ ವರ್ಗದ ಪುನರಾವರ್ತಿತ (Repeater) ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಇರುವುದಿಲ್ಲ. ಅವರುಗಳು ಪೂರ್ಣ ಶುಲ್ಕ ಭರಿಸಬೇಕು.
5. ಸರ್ಕಾರ ನಿಗಧಿಪಡಿಸಿದ ಆದಾಯದ ಮಿತಿಯೊಳಗಿರುವ SC/ST ಹಾಗೂ ಇನ್ನುಳಿದ OBC/LIG ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಸರ್ಕಾರದಿಂದ ಮಂಜೂರಾತಿ ಪಡೆದ ನಂತರ ಆಯಾ ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಯದ ಪ್ರಾಂಶುಪಾಲರು ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು.
6. ಸರ್ಕಾರ ನಿಗಧಿಪಡಿಸಿದ ಆದಾಯದ ಮಿತಿಯೊಳಗಿರುವ ಶುಲ್ಕ ವಿನಾಯಿತಿ ಪಡೆದಿರುವ SC/ST ಹಾಗೂ ಇನ್ನುಳಿದ OBC/LIG ವಿದ್ಯಾರ್ಥಿಗಳ ವ್ಯತ್ಯಾಸ ಪರೀಕ್ಷಾ ಶುಲ್ಕವನ್ನು ಸರ್ಕಾರದಿಂದ ಮಂಜೂರಾತಿ ಪಡೆದ ನಂತರ ಆಯಾ ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು. ಶುಲ್ಕ ವಿನಾಯಿತಿ ಮೊತ್ತವನ್ನು ಪಾವತಿಸುವಲ್ಲಿ ತಪ್ಪಿದ್ದಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳುವ ಕ್ರಮಕ್ಕೆ ಬದ್ಧರಾಗಿರತಕ್ಕದ್ದು.
7. ಪರೀಕ್ಷೆ ತೆಗೆದುಕೊಳ್ಳುವ ಪುನರಾವರ್ತಿತ (Repeaters) ವಿದ್ಯಾರ್ಥಿಗಳು ಪೂರ್ಣ ಶುಲ್ಕವನ್ನು ಪಾವತಿಸತಕ್ಕದ್ದು.
8. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ತನ್ನ ನೊಂದಣಿ ಸಂಖ್ಯೆಯನ್ನು ಬಿಟ್ಟು ಬೇರೆ ನೊಂದಣಿ ಸಂಖ್ಯೆ ಅಥವಾ ಬೇರೆ ವಿಷಯಗಳನ್ನು ನಮೂದಿಸಿದರೆ ಅಂತಹ ಪ್ರಕರಣಗಳನ್ನು ವಿಶ್ವವಿದ್ಯಾಲಯವು ಸರಿಪಡಿಸಲಾಗುವುದಿಲ್ಲ.
9. ಪರೀಕ್ಷಾ ಶುಲ್ಕವನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಗಳನ್ನು ಯಾವದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ ಮತ್ತು ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
10. ಪರೀಕ್ಷಾ ಶುಲ್ಕ ವಿನಾಯಿತಿ ಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ಸಂಬಂಧಿಸಿದ ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಯದವರು ಪ್ರತ್ಯೇಕವಾಗಿ ಪರೀಕ್ಷಾ ವಿಭಾಗಕ್ಕೆ ಸಲ್ಲಿಸತಕ್ಕದ್ದು.

ಕುಲಸಚಿವರು(ಮೌಲ್ಯಮಾಪನ)
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
2. ಕುಲಸಚಿವರು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
3. ಹಣಕಾಸು ಅಧಿಕಾರಿಗಳು ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
4. ಮೇ// ಲಾಜಿಸಿಸ್, ಬೆಂಗಳೂರು, ಶಾಖೆ ವಿಶ್ರೀಕೃ ವಿಶ್ವವಿದ್ಯಾಲಯ ಆವರಣ, ಬಳ್ಳಾರಿ.
5. ಎಲ್ಲಾ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರು/ಸಂಯೋಜಕರು, ವಿ.ಶ್ರೀ.ಕೃ. ವಿಶ್ವವಿದ್ಯಾಅಯ, ಬಳ್ಳಾರಿ ರವರ ಮಾಹಿತಿಗಾಗಿ.
6. ಪ್ರಾಂಶುಪಾಲರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಯ ಈ ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಸ್ನಾತಕೋತ್ತರ ಮಹಾವಿದ್ಯಾಲಯಗಳು.